ಶ್ರೀ ರೇವೂನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು)

ಅ) ವಿಶೇಷ ಘಟಕ ಯೋಜನೆ, ಗಿರಿಜನ ಉಪ ಯೋಜನೆ ಹಾಗೂ ವಿಶೇಷ ಅಭಿವೃದ್ಧಿ ಯೋಜನೆ ಮತ್ತು ಇಲಾಖೆಯ ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ಕಾರ್ಯಕ್ರಮಗಳು ಇವುಗಳನ್ನು ಕಳೆದ ಮೂರು ವರ್ಷಗಳಿಂದ ಬೀದರ ಜಿಲ್ಲೆಯ ಪಶು ಸಂಗೋಪನಾ ಇಲಾಖೆ ವತಿಯಿಂದ ಅನುಷ್ಠಾನ ಗೊಳಿಸಲಾದ ಯೋಜನೆಗಳು.

ಆ) ಈ ಯೋಜನೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಸರ್ಕಾರ ನಿಗದಿಪಡಿಸಿದ ಅನುದಾನದ ವಿವರಗಳು

ಕಾರ್ಯಕ್ರಮದ ವಿವರ	ನಿಗದಿಪಡಿಸಿದ ಮೊತ್ತ		
	2009–10	2010–11	2011–12
ವಿಶೇಷ ಘಟಕ ಯೋಜನೆ	20.22	40.74	16.68
ಗಿರಿಜನ ಉಪ ಯೋಜನೆ	10.417	48.07	5.70
ವಿಶೇಷ ಅಭಿವೃದ್ಧಿ ಯೋಜನೆ	4.00	13.28	22.99
ಜಿಲ್ಲಾ ಪಂಚಾಯತ್ ಕಾರ್ಯಕ್ರಮಗಳು	59.70	59.70	66.00
ತಾಲ್ಲೂಕು ಪಂಚಾಯತ್ ಕಾರ್ಯಕ್ರಮಗಳು	216.00	231.00	287.27
ಒಟ್ಟು	**310.337**	**392.79**	**398.64**

ಇ) ಇಲಾಖೆಯ ಎಲ್ಲಾ ಯೋಜನೆಗಳಿಗೆ ಬಿಡುಗಡೆ ಮಾಡಿ ವೆಚ್ಚ ಮಾಡಿರುವ ವಿವರವನ್ನು ಅನುಬಂಧ–1, ಅನುಬಂಧ–2 ಮತ್ತು ಅನುಬಂಧ–3 ರಲ್ಲಿ ನೀಡಲಾಗಿದೆ.

ಶಾಲಾ ಪುಸ್ತಕಗಳಲ್ಲಿ ಭಗವದ್ಗೀತೆಯನ್ನು ಅಳವಡಿಸುವುದು.

156 : (208)

ಶ್ರೀ ರಾಮಲಿಂಗಾರೆಡ್ಡಿ (ಬಿಟಿಎಂ ಲೇಔಟ್)

ಅ) ರಾಜ್ಯದಲ್ಲಿ ಎಲ್ಲಾ ಪುಸ್ತಕಗಳಲ್ಲಿ ಭಗವದ್ಗೀತೆಯನ್ನು ಅಳವಡಿಸಲು ಸರ್ಕಾರ ಚಿಂತನೆ ನಡೆಸಿದೆಯೇ

ಆ) ಹಾಗಿದ್ದಲ್ಲಿ ಇದಕ್ಕೆ ಕಾರಣಗಳೇನು ?

ಶ್ರೀ ಎಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಇಲ್ಲ

ಆ) ಅನ್ವಯಿಸವುದಿಲ್ಲ.